## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2013–14ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ಮೂರನೇ ಕಂತಿನ ಅನುದಾನ ಬಿಡುಗಡೆ ಕುರಿತು.

ಓದಲಾಗಿದೆ : ವ್ಯವಸ್ಥಾಪಕ ನಿರ್ದೇಶಕರು, KSBDB ರವರ ಪತ್ರ ಸಂಖ್ಯೆ : KSBDB/ಕ್ರಿ.ಯೋ./CR-18/2013-14/614 ದಿನಾಂಕ 10.01.2014.

**ಪ್ರಸ್ತಾವನೆ :**

2013–14ನೇ ಸಾಲಿನ ರಾಜ್ಯ ಆಯವ್ಯಯದಡಿ, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ₹ 400.00 ಲಕ್ಷಗಳ ಅನುದಾನ ನಿಗದಿಪಡಿಸಲಾಗಿದ್ದು, ಈ ಪೈಕಿ ಕರ್ನಾಟಕ ಜೈವಿಕ ಇಂಧನ ನೀತಿ ಅನುಷ್ಠಾನಕ್ಕಾಗಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ಮೂರನೇ ಕಂತಿನ ಅನುದಾನ ₹ 100.00 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2501–04–105–0–03–059 (ಯೋಜನೆ)ರಡಿ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 30 ಜೈಅಯೋ 2013, ಬೆಂಗಳೂರು, ದಿನಾಂಕ 30.01.2014**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, **₹ 100.00** ಲಕ್ಷಗಳನ್ನು (ರೂ. ನೂರು ಲಕ್ಷಗಳು ಮಾತ್ರ) ಮೂರನೇ ಕಂತಿನ ಅನುದಾನವನ್ನು ಜೈವಿಕ ಇಂಧನ ಅಭಿವೃದ್ಧಿಗಾಗಿ ಮಾತ್ರ ವಿನಿಯೋಗಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು ರವರಿಗೆ ಲೆಕ್ಕ ಶೀರ್ಷಿಕೆ 2501–04–105–0–03–059 (ಯೋಜನೆ)ರಡಿ ಈ ಕೆಳಕಂಡ ನಿಬಂಧನೆಗೊಳಪಟ್ಟು ಬಿಡುಗಡೆ ಮಾಡಿದೆ.

ಸದರಿ ಅನುದಾನವು ಹಂಗಾಮಿಯಾಗಿದ್ದು, ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿದ್ದು, ಉದ್ದೇಶಿತ ಕಾರ್ಯಕ್ರಮಕ್ಕಾಗಿ ವಿನಿಯೋಗಿಸತಕ್ಕದ್ದು.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು ರವರು ಗ್ರಾಂಟ್ – ಇನ್ – ಏಡ್ ಬಿಲ್ಲನ್ನು ಸಲ್ಲಿಸಿ, ನಿರ್ದೇಶಕರು (ಗ್ರಾಮೂಸೌ–2) ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿರವರ ಮೇಲು ರುಜು ಪಡೆದು ಖಜಾನೆಯಿಂದ ಅನುದಾನ ಪಡೆಯತಕ್ಕದ್ದು. ಬಿಡುಗಡೆ ಮಾಡಲಾಗಿರುವ ಅನುದಾನಕ್ಕೆ ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿತವಾಗಿ ಸಲ್ಲಿಸುವುದು.

ಹಾಲಿ ಬಿಡುಗಡೆ ಮಾಡಲಾಗುತ್ತಿರುವ ಅನುದಾನವನ್ನು ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ ಗ್ರಾಅಪ 39 ಪಿಬಿಎಸ್ 2014 ದಿನಾಂಕ 28.01.2014 ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

30/1/14

(ರೋಹಿಣಿ ಸಿಂಧೂರಿ)
ನಿರ್ದೇಶಕರು (ಗ್ರಾಮೂಸೌ–2) ಮತ್ತು
ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ :

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು.
3. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾ.ಅ.ಮತ್ತು ಪಂಚಾಯತ್ ರಾಜ್ ಇಲಾಖೆ.
6. ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್ ನಂ:49 ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರೆನ್ಸ್ ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿ.